# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | (483) 420 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ.ನಮೋಶಿ |
| ಉತ್ತರಿಸುವ ದಿನಾಂಕ | : | 30-01-2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶೇ.56ರ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಒಟ್ಟು ಎಷ್ಟು ಪ್ರಕರಣಗಳು ದಾಖಲಾಗಿವೆ; ಈ ಪ್ರಕರಣಗಳು ಯಾವ ಹಂತದಲ್ಲಿವೆ; (ವಿವರ ನೀಡುವುದು); | ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧ್ಯಾದೇಶ 2022ರನ್ನು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿಯನ್ನು ಶೇ.17 & ಶೇ.7ಕ್ಕೆ ಪರಿಷ್ಕರಿಸಿ ಹೊರಡಿಸಲಾದ ಅಧಿನಿಯಮ ಮತ್ತು ಇತರೆ ಸರ್ಕಾರಿ ಆದೇಶಗಳನ್ನು ಪ್ರಶ್ನಿಸಿ ಈ ಕೆಳಕಂಡಂತೆ ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಲಾಗಿದೆ. |
| ಆ) | ಶೇ.56ರ ಮೀಸಲಾತಿ ಪ್ರಕರಣವು ಇತ್ಯರ್ಥವಾಗುವವರೆಗೂ ರಾಜ್ಯದ ಲಕ್ಷಾಂತರ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹಳೆಯ ಶೇ.50ರ ಮೀಸಲಾತಿ ಮತ್ತು ರೋಸ್ಟರ್ ಅನುಸಾರವಾಗಿಯೇ ನೇಮಕಾತಿಗಳನ್ನು ಮಾಡಿಕೊಳ್ಳಬಹುದಲ್ಲವೇ; ಈ ಕುರಿತು ಸರ್ಕಾರ ಯಾವ ನಿರ್ಧಾರ ಕೈಗೊಳ್ಳಲಿದೆ; (ಸ್ಪಷ್ಟನೆ ನೀಡುವುದು); | |
| ಇ) | ಮುಂದಿನ ದಿನಗಳಲ್ಲಿ ಈ ಮೀಸಲಾತಿ ಪ್ರಕರಣವನ್ನು ಬೇಗ ಇತ್ಯರ್ಥ ಪಡಿಸಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ (ವಿವರ ನೀಡುವುದು) | |

| ಕ್ರ ಸಂ | ಪ್ರಕರಣ ಸಂಖ್ಯೆ | ವಾದಿಗಳ ವಿವರ | ಪ್ರತಿವಾದಿಗಳ ವಿವರ |
|---|---|---|---|
| 1 | WP 200448/2025 | ಮಹೇಂದ್ರ ಕುಮಾರ್ ಮಿತ್ರ | 1.ಕಾರ್ಯದರ್ಶಿಗಳು, ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ, ಭಾರತ ಸರ್ಕಾರ.<br>2.ಕಾರ್ಯದರ್ಶಿಗಳು, ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ, ನವದೆಹಲಿ.<br>3.ಪ್ರಧಾನ ಕಾರ್ಯದರ್ಶಿಗಳು, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆ.<br>4.ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ. |
| 2 | WP 3145/2023 | ಮಹೇಶ್ | ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ |

| | | | |
|---|---|---|---|
| 3 | WP 17968/2025 | ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ & ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 1.ಮಧು ಬಿ.ಎನ್, ಚನ್ನಪಟ್ಟಣ, ರಾಮನಗರ<br>2. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ. |
| 4 | WP 25515/ 2025 | ಸಾಗರ್ ಹೆಚ್.ಆರ್ & ಇತರರು | 1.ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.<br>2.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿ.ಆ.ಸು.ಇ<br>3.ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.<br>4. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ.<br>5.ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. |

ಮೇಲಿನ ಪ್ರಕರಣಗಳನ್ನು ಒಟ್ಟುಗೂಡಿಸಿ **ರಿಟ್ ಅರ್ಜಿ:-200448/2025ರಲ್ಲಿ** ವಿಚಾರಣೆ ನಡೆಸಿದ, ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:-**19-11-2025 & 27-11-2025ರ** ಮಧ್ಯಂತರ ಆದೇಶಗಳಲ್ಲಿ ಮೀಸಲಾತಿ ಪರಿಷ್ಕರಣೆ ಆದೇಶದ ಅಧಿನಿಯಮ ಜಾರಿಗೆ ತಾತ್ಕಾಲಿಕ ತಡೆ ನೀಡಿ ಈ ಕೆಳಕಂಡಂತೆ ಆದೇಶಿಸುತ್ತಾ, ಪ್ರಕರಣದ ಮುಂದಿನ ವಿಚಾರಣೆಯನ್ನು **ದಿ:-22-01-2026ಕ್ಕೆ** ನಿಗಧಿಪಡಿಸಲಾಗಿತ್ತು.

"Considering that recruitment process has already begun pursuant to certain notifications specifying the enhanced reservation under the Karnataka Scheduled castes and

| | | |
|---|---|---|
| | | Scheduled Tribes (Reservation of Seats in Education Institutions and Appointments of Posts and Services under the State) Act, 2022 (hereafter Act), we consider it apposite to modify our order dated 19-11-2025 to direct that no further notifications for recruitment or appointment on the basis of increased reservation would be issued till the disposal of the present petitions. The recruitment pursuant to the process that is already begun may be continued. However, any appointment made shall be subject to the final outcome of present petitions.<br><br>All appointment / promotion letters would expressly indicate that the appointment and promotion is subject to the outcome of the present petitions and the candidates would not claim any equities, in the event the increased reservation is struck down.<br><br>We also clarify that the present order is confined to only modifying the order dated 19-11-2025 and would not affect the operation of any other specific interim order of final order granted by the court or the tribunal"<br><br>ಮೇಲೆ ವಿವರಿಸಿದಂತೆ, ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶವನ್ನು ಮಾರ್ಪಡಿಸುವಂತೆ ಕೋರಿ **ದಿ:-11.12.2025ರಂದು** ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರಿಂದ ಮಧ್ಯಂತರ ಅರ್ಜಿಯನ್ನು ಈ ಕೆಳಕಂಡಂತೆ ಮಾನ್ಯ ನ್ಯಾಯಾಲಯಕ್ಕೆ ದಾಖಲಿಸಲಾಗಿರುತ್ತದೆ.<br><br>"Hon'ble court may be pleased to pass an order permitting the state government to go ahead with fresh recruitments in terms of the Karnataka Scheduled castes and Scheduled Tribes (Reservation of Seats in Education Institutions and Appointments of Posts and Services under the State) Act, 2022 subject to the result of this writ petition, in the interest of justice and equity"<br><br>ಸದರಿ ಪ್ರಕರಣದ ಮುಂದಿನ ವಿಚಾರಣೆಯನ್ನು ಮಾನ್ಯ ನ್ಯಾಯಾಲಯವು **ದಿ:-12-02-2026** ಕ್ಕೆ ನಿಗಧಿಪಡಿಸಿದೆ. ಮಾನ್ಯ ಉಚ್ಚ ನ್ಯಾಯಾಲಯವು ನೀಡುವ ತೀರ್ಪಿನಂತೆ ಮುಂದಿನ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |

| | | |
|---|---|---|
| ಈ) | 384 ಕೆಎಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಯು ಪೂರ್ವಭಾವಿ ಪರೀಕ್ಷೆ, ಮುಖ್ಯ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆ ಸೇರಿ ಮೂರು ಹಂತಗಳಲ್ಲಿಯೂ ರೋಸ್ಟರ್ / ಮೀಸಲಾತಿ ಅನ್ವಯವಾಗಲಿದ್ದು, ಶೇ.56ಗೆ ಸಂಬಂಧಿಸಿದ ಮಧು ಬಿ.ಎಸ್ ಪ್ರಕರಣದಲ್ಲಿ ಉಚ್ಚ ನ್ಯಾಯಾಲಯವು ಅಂತಿಮವಾಗಿ ಶೇ.50 ಗೆ ನಿಗಧಿಪಡಿಸಲು ಆದೇಶಿಸಿದರೆ ಈ ನೇಮಕಾತಿಯಲ್ಲಿ ಯಾವ ರೀತಿಯ ಮಾರ್ಪಾಡುಗಳನ್ನು ಮಾಡಲಾಗುತ್ತದೆ. | ಪ್ರಸ್ತುತ ಪ್ರಕರಣವು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿದ್ದು, ಸದರಿ ವಿಷಯವು ವಿಚಾರಣಾಧೀನ (Sub judice) ವಾಗಿರುತ್ತದೆ. ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪನ್ನು ಪರಿಶೀಲಿಸಿ, ಮುಂದಿನ ಅಗತ್ಯ ಕ್ರಮವಹಿಸಲಾಗುವುದು. |

**ಸಕಇ 118 ಪಕವಿ 2026**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**